ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ವಿಜಯಪುರದಲ್ಲಿನ ವಿಮಾನ ನಿಲ್ದಾಣ ಕಾಮಗಾರಿಯ ಪ್ರಗತಿ ಕುರಿತು

ಶ್ರೀ ಸುನೀಲ್‌ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

118 (694+695+696) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ವಿಜಯಪುರದಲ್ಲಿ ವಿಮಾನ ನಿಲ್ದಾಣದ ಕಾಮಗಾರಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಾಮಗಾರಿ ಪ್ರಾರಂಭವಾಗಿಲ್ಲವೇಕೆ ;

(ಆ) ವಿಮಾನ ನಿಲ್ದಾಣ ನಿರ್ಮಾಣಕ್ಕೆ ಅಗತ್ಯಕ್ಕನುಗುಣವಾಗಿ ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆಯೇ ; ಭೂಸ್ವಾಧೀನ ಪಡಿಸಿಕೊಂಡಿದ್ದರೆ, ಎಷ್ಟು ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ ; (ಮಾಹಿತಿ ನೀಡುವುದು)

(ಇ) ಯಾವ ಕಾಲಮಿತಿಗೆ ಒಳಪಟ್ಟು ವಿಮಾನ ನಿಲ್ದಾಣ ನಿರ್ಮಾಣ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದು ; ಸದರಿ ಕಾಮಗಾರಿಯು ಎಷ್ಟು ವರ್ಷಗಳಿಂದ ಪ್ರಗತಿಯಲ್ಲಿದೆ ಮತ್ತು ಇದುವರೆವಿಗೂ ಈ ಯೋಜನೆಗೆ ಬಿಡುಗಡೆಯಾದ ಹಣ ಎಷ್ಟು ; (ವಿವರ ನೀಡುವುದು)

(ಈ) ವಿಮಾನ ನಿಲ್ದಾಣ ಕಾಮಗಾರಿಗೆ ಸಂಬಂಧಿಸಿದಂತೆ ಖರ್ಚು-ವೆಚ್ಚ ಹಾಗೂ ಪ್ರಸ್ತುತ ಸ್ಥಿತಿಗತಿಗಳೇನು ; ಸದರಿ ವಿಮಾನ ನಿಲ್ದಾಣ ಕಾಮಗಾರಿಗೆ ಅನುದಾನದ ಕೊರತೆ ಇದೆಯೇ ; (ಸಂಪೂರ್ಣ ವಿವರ ನೀಡುವುದು)

(ಉ) ಈ ಕಾಮಗಾರಿಯ ಬಗ್ಗೆ ಸರ್ಕಾರ ಆಸಕ್ತಿ ತೋರದೆ ಇರಲು ಕಾರಣವೇನು ; ಇದಕ್ಕೆ ಇರುವ ಅಡೆ-ತಡೆಗಳು ಏನು ;

(ಊ) ಸದರಿ ಕಾಮಗಾರಿಗೆ ಬೇಕಾಗುವ ಅಗತ್ಯ ವೆಚ್ಚವನ್ನು ಅಂದಾಜಿಸಲಾಗಿದೆಯೇ? (ವಿವರಗಳನ್ನು ನೀಡುವುದು)